4

ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ     ದಿನಾಂಕ : DATE : 14/7/20

# 'ಹಾಸಿಗೆ ನೀಡದ ಆಸ್ಪತ್ರೆಗಳ ಲೈಸೆನ್ಸ್ ರದ್ದು ಮಾಡಿ'

## ಹಾಸಿಗೆ ನೀಡದೆ ಸತಾಯಿಸುತ್ತಿರುವವರಿಗೆ ಕಾನೂನಿನ ಬಿಸಿ ಮುಟ್ಟಿಸಬೇಕಿದೆ | ಸಿಎಂಗೆ ಡಿಸಿಎಂ ಸಲಹೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು 14/7/20



ಕೋವಿಡ್-19 ಸೋಂಕಿತರಿಗಾಗಿ ಸರಕಾರದ ವಶಕ್ಕೆ ತಮ್ಮಲ್ಲಿರುವ ಶೇ.50ರಷ್ಟು ಹಾಸಿಗೆಗಳನ್ನು ಇದುವರೆಗೂ ನೀಡದ ಖಾಸಗಿ ಆಸ್ಪತ್ರೆಗಳು, ವೈದ್ಯಕೀಯ ಕಾಲೇಜುಗಳ ಮಾನ್ಯತೆಯನ್ನು ಕೂಡಲೇ ರದ್ದು ಮಾಡಬೇಕು ಎಂದು ನಗರದ ಕೊರೋನಾ ಕೇರ್ ಕೇಂದ್ರಗಳ ಉಸ್ತುವಾರಿಯೂ ಆಗಿರುವ ಉಪಮುಖ್ಯಮಂತ್ರಿ ಡಾ.ಸಿ.ಎನ್. ಅಶ್ವತ್ಥನಾರಾಯಣ ಅವರು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರನ್ನು ಒತ್ತಾಯಿಸಿದ್ದಾರೆ.

ಸೋಮವಾರ ಮುಖ್ಯಮಂತ್ರಿಗಳು ನಡೆಸಿದ ಎಲ್ಲ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಹಾಗೂ ಪೊಲೀಸ್ ವರಿಷ್ಠಾಧಿಕಾರಿಗಳ ವಿಡಿಯೋ ಸಂವಾದದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಸಕಾಲಕ್ಕೆ ಸರಕಾರಕ್ಕೆ ಖಾಸಗಿ ಆಸ್ಪತ್ರೆಗಳು ಮತ್ತು ವೈದ್ಯಕೀಯ ಕಾಲೇಜುಗಳು ಹಾಸಿಗೆಗಳನ್ನು ಹಸ್ತಾಂತರ ಮಾಡದೇ ಇರುವುದರಿಂದ ಸಮಸ್ಯೆಯಾಗುತ್ತಿದೆ. ಅವರು ನಿರ್ಲಕ್ಷ್ಯ ಧೋರಣೆ ತಾಳುತ್ತಿದ್ದಾರೆ ಎಂದು ದೂರಿದರು.

ಸರ್ಕಾರ ಸೇರಿ ಪ್ರತಿಯೊಬ್ಬರೂ ಸಮರೋಪಾದಿಯಲ್ಲಿ ಕೆಲಸ ಮಾಡುತ್ತಿರುವಾಗ ಕೆಲವರು ಮಾತ್ರ ಹಾಸಿಗೆಗಳನ್ನು ನೀಡದೇ ಸತಾಯಿಸುತ್ತಿರುವುದು ಸರಿಯಲ್ಲ. ಇವರಿಗೆ ಕಾನೂನಿನ ಬಿಸಿ ಮುಟ್ಟಿಸಬೇಕಾಗಿದೆ ಎಂದ ಅವರು, ಕೆಲ ಖಾಸಗಿ ಆಸ್ಪತ್ರೆಗಳಲ್ಲಿ **ಕೋವಿಡ್ ರಹಿತ ರೋಗಿಗಳಿಗೆ ಚಿಕಿತ್ಸೆ** ನಿರಾಕರಿಸಲಾಗುತ್ತಿದೆ. ಅದರಲ್ಲೂ ಉಸಿರಾಟದ ತೊಂದರೆ, ಮತ್ತಿತರೆ ತುರ್ತು ಸಮಸ್ಯೆಗಳಿರುವ ಹಿರಿಯ ನಾಗರಿಕರಿಗೆ ಅಂಥ ಕಡೆ ಚಿಕಿತ್ಸೆ ಲಭ್ಯವಾಗುತ್ತಿಲ್ಲ ಎಂಬ ಅಂಶವನ್ನು ಅಶ್ವತ್ಥನಾರಾಯಣ ಅವರು ಮುಖ್ಯಮಂತ್ರಿಗಳ ಗಮನಕ್ಕೆ ತಂದರು.

**ವೈದ್ಯರ ಕೊರತೆ:** ಬೆಂಗಳೂರಿನಂಥ ಮಹಾನಗರದಲ್ಲಿ ವೈದ್ಯರು, ನರ್ಸ್‌ಗಳು ಹಾಗೂ ಪೂರಕ ಸಿಬ್ಬಂದಿಯ ಕೊರತೆ ಕಂಡುಬರುತ್ತಿದೆ ಎಂದು ಇದೇ ವೇಳೆ ಡಿಸಿಎಂ ಅಶ್ವತ್ಥನಾರಾಯಣ ಹೇಳಿದರು. ಭಾರೀ ಪ್ರಮಾಣದಲ್ಲಿ ವೈದ್ಯರು ವಾಸ ಮಾಡುತ್ತಿರುವ ಈ ನಗರದಲ್ಲೇ ಈ ಸಮಸ್ಯೆ ಆಗಬಾರದಿತ್ತು. ಕೂಡಲೇ ಆರೋಗ್ಯ ಇಲಾಖೆ, ವೈದ್ಯಕೀಯ ಶಿಕ್ಷಣ ಇಲಾಖೆ ಮತ್ತು ಬಿಬಿಎಂಪಿ ಇತ್ತ ಗಮನ ಹರಿಸಿ ತುರ್ತು ಕ್ರಮ ಕೈಗೊಂಡರೆ ಅನುಕೂಲವಾಗುತ್ತದೆ. ಇಲ್ಲವಾದರೆ ಸೋಂಕಿತರ ಸಂಖ್ಯೆ ಏಕಾಏಕಿ ಹೆಚ್ಚಾದರೆ ಮುಂದೆ ಸಮಸ್ಯೆಯಾಗುತ್ತದೆ ಎಂದು ಅವರು ಎಚ್ಚರಿಸಿದರು.

# ಎರಡು ಆಸ್ಪತ್ರೆಗಳಿಗೆ ನೋಟಿಸ್

## ಅಪೊಲೋ, ವಿಕ್ರಮ್ ಆಸ್ಪತ್ರೆಗೆ ಡೀಸಿ ನೋಟಿಸ್ | ಲೈಸೆನ್ಸ್ ರದ್ದು ಎಚ್ಚರಿಕೆ

**ಬೆಂಗಳೂರು:** ಸರ್ಕಾರದ ವಶಕ್ಕೆ ಕೊರೋನಾ ಸೋಂಕಿತರ ಚಿಕಿತ್ಸೆಗೆ ಶೇಕಡ 50ರಷ್ಟು ಹಾಸಿಗೆಗಳನ್ನು ಮೀಸಲಿಟ್ಟು ಮಾಹಿತಿ ಸಲ್ಲಿಸದ ಹಿನ್ನೆಲೆಯಲ್ಲಿ ನಗರದ ಎರಡು ಪ್ರತಿಷ್ಠಿತ ಆಸ್ಪತ್ರೆಗಳಿಗೆ ಬೆಂಗಳೂರು ನಗರ ಜಿಲ್ಲಾಧಿಕಾರಿ ಜೆ.ಎನ್.ಶಿವಮೂರ್ತಿ ನೋಟಿಸ್ ಜಾರಿಮಾಡಿದ್ದಾರೆ.

ಜಯನಗರದ ಅಪೋಲೋ ಸ್ಪೆಷಿಯಾಲಿಟಿ ಆಸ್ಪತ್ರೆ, ಮಿಲ್ಲರ್ಸ್ ರಸ್ತೆಯ ವಿಕ್ರಂ ಆಸ್ಪತ್ರೆಗೆ ಸೋಮವಾರ ನೋಟಿಸ್ ಜಾರಿಗೊಳಿಸಲಾಗಿದೆ.

ಕೋವಿಡ್ ಚಿಕಿತ್ಸೆಗೆ ತಮ್ಮ ಆಸ್ಪತ್ರೆಗಳಲ್ಲಿನ ಶೇ.50ರಷ್ಟು ಹಾಸಿಗೆಗಳನ್ನು ಮೀಸಲಿಟ್ಟು, ಅದರಲ್ಲಿ ಅರ್ಧದಷ್ಟು ಹಾಸಿಗೆಗಳಿಗೆ ಸರ್ಕಾರ ರೆಫರಲ್ ಮಾಡುವ ಸೋಂಕಿತರಿಗೆ ಚಿಕಿತ್ಸೆ ಒದಗಿಸುವಂತೆ ಜೂನ್ 29ರಂದು ಸರ್ಕಾರ ಆದೇಶ ಮಾಡಿದ್ದರೂ, ಇದನ್ನು ತಮ್ಮ ಆಸ್ಪತ್ರೆಗಳು ಪಾಲಿಸಿಲ್ಲವೆಂಬುದು ಕಂಡುಬಂದಿದೆ. ಇದರಿಂದ ತಮ್ಮ ಸಂಸ್ಥೆಗಳು ಸಾಂಕ್ರಾಮಿಕ ರೋಗಗಳ ಕಾಯ್ದೆ ಮತ್ತು ಖಾಸಗಿ ಆಸ್ಪತ್ರೆಗಳ ನಿಯಂತ್ರಣ ಕಾಯ್ದೆಯ (ಕೆಪಿಎಂಇ) ನಿಯಮಗಳನ್ನು ಉಲ್ಲಂಘಿಸಿದಂತಾಗಿದೆ. ಹಾಗಾಗಿ ತಮ್ಮ ಆಸ್ಪತ್ರೆಗಳ ಕೆಪಿಎಂಇ ಪರವಾನಗಿಯನ್ನು ರದ್ದುಗೊಳಿಸುವುದು ಸೇರಿದಂತೆ ಕಾಯ್ದೆಯನ್ವಯ ಶಿಸ್ತು ಕ್ರಮ ಜರುಗಿಸಬಾರದೇಕೆ ಎಂದು [illegible] ನೋಟಿಸ್ ನೀಡಿದ್ದಾರೆ.

ಅಲ್ಲದೆ, ಈ ನೋಟಿಸ್‌ಗೆ [illegible] ದಿನದಲ್ಲಿ ಸಮಜಾಯಿಷಿ ನೀಡಬೇಕು. ತಪ್ಪಿದಲ್ಲಿ ತಾವು ಯಾವುದೇ ಹೇಳಿಕೆ ನೀಡಿಲ್ಲ ಎಂದು ಪರಿಗಣಿಸಿ ಕಾಯ್ದೆಯನ್ವಯ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಲಾಗಿದೆ.

ಬೆಂಗಳೂರು ನಗರ ಆರೋಗ್ಯಾಧಿಕಾರಿ ಡಾ. ಶ್ರೀನಿವಾಸ್ ಗುಳೂರು ಅವರು ಸೋಮವಾರ ಖುದ್ದು ಎರಡೂ ಆಸ್ಪತ್ರೆಗಳಿಗೆ ಭೇಟಿ ನೀಡಿ ಜಿಲ್ಲಾಧಿಕಾರಿಗಳು ಜಾರಿಗೊಳಿಸುವ ನೋಟಿಸನ್ನು ನೀಡಿದ್ದಾರೆ. ಅಲ್ಲದೆ, ಮಂಗಳವಾರದೊಳಗೆ ನೋಟಿಸ್‌ಗೆ ಉತ್ತರಿಸದಿದ್ದರೆ ಆಸ್ಪತ್ರೆ ಪರವಾನಗಿ ರದ್ದುಪಡಿಸುವುದಾಗಿ ತಿಳಿಸಲಾಗಿದೆ.

# ಆಸ್ಪತ್ರೆಗಳ ವಿರುದ್ಧ ಕ್ರಮ: ಸಿಎಂ

## ಜಿಲ್ಲಾಧಿಕಾರಿಗಳು, ಪೊಲೀಸ್ ವರಿಷ್ಠರ ಸಭೆಯಲ್ಲಿ ಸೂಚನೆ

**ಬೆಂಗಳೂರು:** ಬೆಂಗಳೂರಿನಲ್ಲಿ ಕೋವಿಡ್ ಮತ್ತು ನಾನ್ ಕೋವಿಡ್‌ಗೆ ಚಿಕಿತ್ಸೆ ನೀಡಲು ಸಹಕರಿಸದ ಆಸ್ಪತ್ರೆಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಸೂಚನೆ ನೀಡಿದ್ದಾರೆ.



ಮುಖ್ಯಮಂತ್ರಿಗಳ ಗೃಹ ಕಚೇರಿ ಕೃಷ್ಣಾದಲ್ಲಿ ಸೋಮವಾರ ಜಿಲ್ಲಾಧಿಕಾರಿಗಳು, ಪೊಲೀಸ್ ವರಿಷ್ಠಾಧಿಕಾರಿಗಳ ಜತೆ ಸಭೆ ನಡೆಸಿದ ಅವರು, ಬೂತ್ ಮಟ್ಟದಲ್ಲಿ ಕ್ವಾರಂಟೈನ್, ಸಂಪರ್ಕಿತರ ಪತ್ತೆ ಹಚ್ಚುವುದು, ಮನೆ ಮನೆ ಸಮೀಕ್ಷೆ ನಡೆಸುವ ಪ್ರಕ್ರಿಯೆಯನ್ನು ಪರಿಶೀಲನೆ ನಡೆಸಲು ಬೂತ್ ಮಟ್ಟದ ಸಮಿತಿಗಳನ್ನು ರಚಿಸಬೇಕು. ಜನಪ್ರತಿನಿಧಿಗಳು ಮತ್ತು ಸ್ವಯಂ ಸೇವಕರ ಸಹಕಾರವನ್ನು ಪಡೆಯುವಂತೆ ತಿಳಿಸಿದರು.

60 ವರ್ಷ ಮೇಲ್ಪಟ್ಟವರು ಮತ್ತು ಇತರೆ ತೀವ್ರ ಸ್ವರೂಪದ ಕಾಯಿಲೆಯಿಂದ ಬಳಲುತ್ತಿರುವವರನ್ನು ಪ್ರತ್ಯೇಕವಾಗಿ ರಿಸಬೇಕು. ಐಎಲ್ಐ ಮತ್ತು ಉಸಿರಾಟದ ತೊಂದರೆ ಇರುವವರನ್ನು ಗುರುತಿಸಿ ಕಡ್ಡಾಯವಾಗಿ ಕೋವಿಡ್ ಪರೀಕ್ಷೆಗೊಳಪಡಿಸಬೇಕು ಎಂದು ಸಿಎಂ ಸೂಚಿಸಿದ್ದಾರೆ.

ಸೀಲ್‌ಡೌನ್ ಪ್ರಕ್ರಿಯೆಯನ್ನು ಪರಿಣಾಮಕಾರಿಗೆ ಮಾಡಬೇಕು. ಈ ಪ್ರದೇಶಗಳಲ್ಲಿ ಹೆಚ್ಚು ಪರೀಕ್ಷೆಗಳು ನಡೆಸಬೇಕು ಎಂದು ಹೇಳಿದರು.